ತೆಗೆದುಕೊಂಡಿರುವುದಿಲ್ಲ. ಸದರಿ ಅಗತ್ಯ ಕಾಮಗಾರಿ ಮುಗಿಸಿದ ಕೂಡಲೇ ಕಟ್ಟಡದ ಉಪಯೋಗ ಜನರಿಗೆ ದೊರಕಲು ಕಟ್ಟಡದ ಸ್ವಾಧೀನ ಪಡೆದು ಆಸ್ಪತ್ರೆ ಪ್ರಾರಂಭಿಸಲು ಸಂಬಂದಿಸಿದವರಿಗೆ ಸೂಚಿಸಲಾಗಿದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸರಕಾರಿ ಪ್ರೌಢಶಾಲೆಗಳಿಗೆ ಸ್ವಂತ ಕಟ್ಟಡ

352(712) ಶ್ರೀ ಕುಂಬ್ಳೆ ಸುಂದರರಾವ್ (ಸುರತ್ಕಲ್) ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವವು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಸರಕಾರಿ ಪ್ರೌಢಶಾಲೆಗಳಿಗೆ ಸ್ವಂತ ಕಟ್ಟಡಗಳಿವೆ? ಎಷ್ಟು ಶಾಲೆಗಳು ಬಾಡಿಗೆ ಕಟ್ಟಡದಲ್ಲಿವೆ;

ಆ) ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಶಾಲೆಗಳಿಗೆ ಸ್ವಂತ ಕಟ್ಟಡ ಒದಗಿಸುವ ಯೋಜನೆ ಸರ್ಕಾರದ ಮುಂದಿದೆಯೆ?

ಇ) ದಕ್ಷಿಣ ಕನ್ನಡ ಜಿಲ್ಲೆ ಉಪನಿರ್ದೇಶಕರ ಕಛೇರಿಗೆ ಸ್ವಂತ ಕಟ್ಟಡ ಒದಗಿಸಲು ಸರ್ಕಾರವು ಕೂಡಲೇ ಕ್ರಮ ಕೈಗೊಳ್ಳುವುದೇ?

ಶ್ರೀ ಹೆ.ಚ್.ಜಿ.ಗೋವಿಂದೆಗೌಡ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು.

ಅ) ಸ್ವಂತ ಕಟ್ಟಡವಿರುವ ಶಾಲೆಗಳ ಸಂಖ್ಯೆ - 177 ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಶಾಲೆಗಳ - 12 ಸಂಖ್ಯೆ

ಆ) ಇದೆ.

ಇ) ಪ್ರಸ್ತಾವನೆ ಪರಿಶೀಲನೆಯಲ್ಲಿದೆ

ಸರ್ಕಾರಿ ಪಾಲಿಟೆಕ್ನಿಕ್ ಆರೆಕಾಲಿಕ ಉಪನ್ಯಾಸಕರ ಕುರಿತು

353(615) ಶ್ರೀ ಕರಡಿ ಸಂಗಣ್ಣ (ಕೊಪ್ಪಳ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರವರೆ

ಅ) ರಾಜ್ಯದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಆರೆಕಾಲಿಕ ಉಪನ್ಯಾಸಕರಾಗಿ ಎಷ್ಟು ಜನ ಸೇವೆ ಸಲ್ಲಿಸುತ್ತಿದ್ದಾರೆ (ಜಿಲ್ಲಾವಾರು ವಿವರ ನೀಡುವುದು)

ಆ) ಸರ್ಕಾರದ ಪದವಿ ಕಾಲೇಜ್‌ನಲ್ಲಿ ಸೇವೆ ಸಲ್ಲಿಸುತ್ತಿರುವ ಆರೆಕಾಲಿಕ ಉಪನ್ಯಾಸಕರಿಗೆ ವೇತನ ನಿಗದಿ ಪಡಿಸಿದಂತೆ ಈ ಆರೆಕಾಲಿಕ ಉಪನ್ಯಾಸಕರಿಗೆ ವೇತನ ನಿಗದಿಪಡಿಸಲು ಸರ್ಕಾರಕ್ಕೆ ಇರುವ ತೊಂದರೆ ಏನು;